**All India Radio: Bangalore**
**National Bulletin In Kannada**
**15.06.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಭಾರತ-ಸ್ಲೊವಾಕಿಯಾ ಬಾಂಧವ್ಯ 'ಸಮಗ್ರ ಪಾಲುದಾರಿಕೆ' ಮಟ್ಟಕ್ಕೆ ಏರಿಕೆ: ರಕ್ಷಣಾ ಮತ್ತು ಡಿಜಿಟಲ್ ವಲಯದಲ್ಲಿ ಮಹತ್ವದ ಒಪ್ಪಂದ

೨. ನವದೆಹಲಿಯಲ್ಲಿ ನಾಳೆ ರಾಷ್ಟ್ರ ಮಟ್ಟದ ವಿಕಸಿತ ಭಾರತ್ ಯುವ ಸಂಸತ್ ಉದ್ಘಾಟಿಸಲಿರುವ ಲೋಕಸಭಾಧ್ಯಕ್ಷ ಓಂ ಬಿರ್ಲಾ

೩. ದೇಶದ ನಗರ ಪ್ರದೇಶಗಳಲ್ಲಿ ಕಳೆದ ಮೇ ತಿಂಗಳಲ್ಲಿ ನಿರುದ್ಯೋಗ ದರ ಶೇಕಡ ೬.೪ಕ್ಕೆ ಕುಸಿತ

೪. ಪ್ರತಿಷ್ಠಿತ ಗ್ರ್ಯಾಂಡ್ ಪ್ರಿಕ್ಸ್ ಉಸ್ತಿ ನಾಡ್ ಲ್ಯಾಬೆಮ್ ಬಾಕ್ಸಿಂಗ್ ಟೂರ್ನಿಗೆ ೧೨ ಸದಸ್ಯರ ಭಾರತೀಯ ತಂಡ ಪ್ರಕಟ

೫. ಫಿಫಾ ವಿಶ್ವಕಪ್ ಫುಟ್ಬಾಲ್; ಇಂದು ಸ್ಪೇನ್-ಕಾಬೊವರ್ಡಿ ಮುಖಾಮುಖಿ

---

ಪ್ರಧಾನಿ ನರೇಂದ್ರ ಮೋದಿ ಮತ್ತು ಸ್ಲೊವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ ಅವರ ನಡುವೆ ಇಂದು ಬ್ರಾಟಿಸ್ಲಾವಾದಲ್ಲಿ ನಿಯೋಗ ಮಟ್ಟದ ಉನ್ನತ ಮಾತುಕತೆ ಜರುಗಿತು. ಮಾತುಕತೆಯ ನಂತರ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಸ್ಲೊವಾಕಿಯಾ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು 'ಸಮಗ್ರ ಪಾಲುದಾರಿಕೆ' ಮಟ್ಟಕ್ಕೆ ಕೊಂಡೊಯ್ಯಲು ನಿರ್ಧರಿಸಲಾಗಿದೆ ಎಂದು ಪ್ರಕಟಿಸಿದರು. ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರವು ಪರಸ್ಪರ ನಂಬಿಕೆ ಮತ್ತು ಕಾರ್ಯತಂತ್ರದ ಒಗ್ಗಟ್ಟಿಗೆ ಸಾಕ್ಷಿಯಾಗಿದೆ ಎಂದ ಪ್ರಧಾನಿ, ರಕ್ಷಣಾ ಕ್ಷೇತ್ರದಲ್ಲಿ ಉಭಯ ರಾಷ್ಟ್ರಗಳು ಪರಸ್ಪರ ಸಹಕಾರದ ಆಶಯ ಪತ್ರಕ್ಕೆ ಸಹಿ ಹಾಕಿವೆ ಎಂದು ತಿಳಿಸಿದರು. ಇಂದು ಡಿಜಿಟಲ್ ತಂತ್ರಜ್ಞಾನ ವಲಯದಲ್ಲಿ ಸಹಿ ಮಾಡಲಾದ ತಿಳಿವಳಿಕೆ ಒಪ್ಪಂದವು ಉಭಯ ದೇಶಗಳ ನಡುವೆ ಸಹಕಾರದ ಹೊಸ ಮಾರ್ಗಗಳನ್ನು ಮುಕ್ತಗೊಳಿಸಲಿದೆ ಎಂದು ಪ್ರಧಾನಿ ಆಶಯ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಸ್ಲೊವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ, ಭಾರತದ ಕ್ಷಿಪ್ರ ಆರ್ಥಿಕ ಬೆಳವಣಿಗೆ, ಡಿಜಿಟಲ್ ಪರಿವರ್ತನೆ ಮತ್ತು ಕೃತಕ ಬುದ್ಧಿಮತ್ತೆ ಕ್ಷೇತ್ರದ ಪ್ರಗತಿಯನ್ನು ಶ್ಲಾಘಿಸಿದರು. ಇದೇ ವೇಳೆ ಅವರು, ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತವನ್ನು ಖಾಯಂ ಸದಸ್ಯ ರಾಷ್ಟ್ರವನ್ನಾಗಿ ಸೇರ್ಪಡೆಗೊಳಿಸಬೇಕು ಎಂದು ಒತ್ತಿ ಹೇಳಿದರು.

---

ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ವತಿಯಿಂದ ನವದೆಹಲಿಯಲ್ಲಿ ನಾಳೆ ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ಅವರು ರಾಷ್ಟ್ರಮಟ್ಟದ ವಿಕಸಿತ ಭಾರತ ಯುವ ಸಂಸತ್ತನ್ನು ಉದ್ಘಾಟಿಸಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ. ಈ ಉಪಕ್ರಮವು ಪ್ರಜಾಪ್ರಭುತ್ವ ಪ್ರಕ್ರಿಯೆಗಳಲ್ಲಿ ಯುವಜನರ ಪಾಲ್ಗೊಳ್ಳುವಿಕೆ, ಆಡಳಿತ, ನೀತಿ ಚರ್ಚೆಗಳು ಹಾಗೂ ಸಂಸತ್ತಿನ ಕಾರ್ಯವೈಖರಿಯ ಬಗ್ಗೆ ಯುವ ನಾಗರಿಕರಿಗೆ ನೇರ ಅನುಭವದ ಮೂಲಕ ಅರಿವು ಮೂಡಿಸುವ ಅವಕಾಶವನ್ನು ಒದಗಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಈ ಕಾರ್ಯಕ್ರಮ ಭಾರತದ ಯುವ ಶಕ್ತಿ, ಅವರ ಆಲೋಚನೆಗಳು ಮತ್ತು ಆಶೋತ್ತರಗಳನ್ನು ರಾಷ್ಟ್ರದ ಚರ್ಚೆಯ ಮುಖ್ಯವಾಹಿನಿಗೆ ತರುವ ಒಂದು ಚಳವಳಿಯಾಗಿದೆ ಎಂದು ಸಚಿವಾಲಯ ತಿಳಿಸಿದೆ.

---

ದೇಶದ ನಗರ ಪ್ರದೇಶಗಳಲ್ಲಿ ೧೫ ವರ್ಷ ಮೇಲ್ಪಟ್ಟವರ ಒಟ್ಟಾರೆ ನಿರುದ್ಯೋಗ ದರವು ಪ್ರಸಕ್ತ ವರ್ಷದ ಮೇ ತಿಂಗಳಿನಲ್ಲಿ ಶೇಕಡಾ ೬.೪ಕ್ಕೆ ಕುಸಿದಿದೆ ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿ ಇಂದು ಬಿಡುಗಡೆ ಮಾಡಿರುವ ಪ್ರಕಟಣೆಯಲ್ಲಿ ತಿಳಿಸಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ಈ ದರವು ಶೇಕಡಾ ೬.೯ರಷ್ಟಿತ್ತು. ಇದೇ ವೇಳೆ ನಗರ ಪ್ರದೇಶದ ಮಹಿಳಾ ನಿರುದ್ಯೋಗ ದರವು ವರ್ಷದ ಕನಿಷ್ಠ ಮಟ್ಟವಾದ ಶೇಕಡಾ ೮.೨ಕ್ಕೆ ಇಳಿಕೆಯಾಗಿದೆ. ಮತ್ತೊಂದೆಡೆ, ಗ್ರಾಮೀಣ ಭಾಗದ ನಿರುದ್ಯೋಗ ದರವು ಕಳೆದ ವರ್ಷದ ಮಟ್ಟದಲ್ಲೇ ಅಂದರೆ ಶೇಕಡಾ ೫.೧ರಷ್ಟು ಸ್ಥಿರವಾಗಿ ಕಾಯ್ದುಕೊಂಡಿದೆ.

---

ಪಶ್ಚಿಮ ಏಷ್ಯಾದಲ್ಲಿ ದೀರ್ಘಕಾಲದಿಂದ ನಡೆಯುತ್ತಿದ್ದ ಜಾಗತಿಕ ಸಂಘರ್ಷವನ್ನು ಕೊನೆಗಾಣಿಸುವ ನಿಟ್ಟಿನಲ್ಲಿ ಅಮೆರಿಕ ಮತ್ತು ಇರಾನ್ ನಡುವೆ ಏರ್ಪಟ್ಟಿರುವ ಒಪ್ಪಂದವನ್ನು ಭಾರತ ಸ್ವಾಗತಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಪ್ರಧಾನಿ ನರೇಂದ್ರ ಮೋದಿ, ಅಮೆರಿಕ ಮತ್ತು ಇರಾನ್ ನಡುವಿನ ಈ ಮಹತ್ವದ ಒಪ್ಪಂದವು ಪ್ರಾದೇಶಿಕವಾಗಿ ಶಾಂತಿ ಮತ್ತು ಸ್ಥಿರತೆಯನ್ನು ಮರುಸ್ಥಾಪಿಸಲು ನೆರವಾಗಲಿದೆ ಎಂದು ಭಾರತ ಆಶಿಸುತ್ತದೆ ಎಂದು ತಿಳಿಸಿದ್ದಾರೆ. ಜೊತೆಗೆ, ಮುಕ್ತ ನೌಕಾಯಾನ ಮತ್ತು ಜಾಗತಿಕ ವಾಣಿಜ್ಯ ಚಟುವಟಿಕೆಗಳು ಸುಗಮವಾಗಿ ಸಾಗಲು ಇದು ದಾರಿಯಾಗಲಿದೆ ಎಂದು ಪ್ರಧಾನಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

---

ಪಶ್ಚಿಮ ಏಷ್ಯಾದ ವಿದ್ಯಮಾನಗಳ ಹಿನ್ನೆಲೆಯಲ್ಲಿ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ರಸಗೊಬ್ಬರ ದಾಸ್ತಾನು ಸುಸ್ಥಿರವಾಗಿದ್ದು, ತೈಲ ಸಂಸ್ಕರಣಾಗಾರಗಳು ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ನವದೆಹಲಿಯಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ಕಳೆದ ನಾಲ್ಕು ದಿನಗಳಲ್ಲಿ ೧ ಕೋಟಿ ೮೪ ಲಕ್ಷ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದ್ದು ಇಂಧನ ಕೊರತೆಯಾಗಿಲ್ಲ ಎಂದರು.

ರಸಗೊಬ್ಬರ ಇಲಾಖೆಯ ಜಂಟಿ ಕಾರ್ಯದರ್ಶಿ ಬಂದನಾ ಪ್ರೇಯಶಿ ಮಾತನಾಡಿ, ಪ್ರಸಕ್ತ ೨೦೨೬ರ ಮುಂಗಾರು ಹಂಗಾಮಿಗೆ ಅಗತ್ಯವಿರುವ ೩೮೩.೯ ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರದಲ್ಲಿ ಈಗಾಗಲೇ ಶೇಕಡಾ ೩೭ ರಷ್ಟು ವಿತರಣೆಯಾಗಿದ್ದು, ದಾಸ್ತಾನು ಸಾಮಾನ್ಯವಾಗಿದೆ ಎಂದು ತಿಳಿಸಿದರು. ಬಂದರು, ಹಡಗು ಮತ್ತು ಜಲಮಾರ್ಗ ಸಚಿವಾಲಯದ ನಿರ್ದೇಶಕ ಒಪೇಶ್ ಕುಮಾರ್ ಶರ್ಮಾ, ೬೨ ಸಾವಿರದ ೩೭೦ ಮೆಟ್ರಿಕ್ ಟನ್ ಸರಕು ಹೊತ್ತ 'ದಿಶಾ' ಎಲ್‌ಎನ್‌ಜಿ ನೌಕೆಯು ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿದ್ದು, ಗುರುವಾರ ಗುಜರಾತ್ ತಲುಪಲಿದೆ. ಗಲ್ಫ್ ಪ್ರದೇಶದ ಉದ್ವಿಗ್ನ ಪರಿಸ್ಥಿತಿಯ ನಡುವೆ ಕಳೆದ ೯೬ ಗಂಟೆಗಳಲ್ಲಿ ೫೦ ನಾವಿಕರು ಸೇರಿದಂತೆ ಇದುವರೆಗೆ ಒಟ್ಟು ೩ ಸಾವಿರದ ೫೮೭ ಕ್ಕೂ ಹೆಚ್ಚು ಭಾರತೀಯ ಕಡಲ ಕಾರ್ಮಿಕರನ್ನು ಸುರಕ್ಷಿತವಾಗಿ ಸ್ವದೇಶಕ್ಕೆ ಕರೆತರಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

---

೨೦೨೬ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಭವ್ಯವಾಗಿ ಆಯೋಜಿಸಲು ಯೋಜಿಸಿರುವ ಆಯುಷ್ ಸಚಿವಾಲಯ, ನವದೆಹಲಿಯಲ್ಲಿ ಇಂದು ೧೨ನೇ ಅಂತಾರಾಷ್ಟ್ರೀಯ ಯೋಗ ದಿನದ ಪೂರ್ವಭಾವಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಆಯುಷ್ ಸಚಿವಾಲಯದ ಕೇಂದ್ರ ಸ್ವತಂತ್ರ ಉಸ್ತುವಾರಿ ಸಚಿವ ಹಾಗೂ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವ ಪ್ರತಾಪರಾವ್ ಜಾಧವ್, ಅಂತಾರಾಷ್ಟ್ರೀಯ ಯೋಗ ದಿನದ ಪ್ರಧಾನ ಕಾರ್ಯಕ್ರಮ ಕೋಲ್ಕತ್ತಾದ ರೆಡ್ ರೋಡ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆಯಲಿದೆ ಎಂದು ತಿಳಿಸಿದರು.

೨೦೨೬ರ ಅಂತರರಾಷ್ಟ್ರೀಯ ಯೋಗ ದಿನವನ್ನು "ಆರೋಗ್ಯಕರ ವಯೋವೃದ್ಧಿಗಾಗಿ ಯೋಗ" ಎಂಬ ಘೋಷವಾಕ್ಯದಡಿ ಆಚರಿಸಲು ಸಿದ್ಧತೆಗಳು ನಡೆಯುತ್ತಿವೆ.

ಈ ಸಂದರ್ಭದಲ್ಲಿ ೪೫ ನಿಮಿಷಗಳ ಯೋಗ ಶಿಷ್ಟಾಚಾರದ ಪ್ರದರ್ಶನವನ್ನು ನಡೆಸಲಾಗುವುದು ಮತ್ತು ಪ್ರಧಾನ ಕಾರ್ಯಕ್ರಮದ ಜೊತೆಜೊತೆಗೆ ಹೂಗ್ಲಿ ನದಿಯಲ್ಲಿ ೫೦೦ ದೋಣಿಗಳಲ್ಲಿ ಯೋಗಪ್ರದರ್ಶನಗಳನ್ನು ನಡೆಸಲು ಯೋಜಿಸಲಾಗಿದೆ ಎಂದು ಸಚಿವರು ತಿಳಿಸಿದರು.

---

ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಇಂದು ಗೋವಾದಲ್ಲಿ ನಡೆದ 'ಜಾಗತಿಕ ಪವನ ದಿನ ೨೦೨೬' ರಾಷ್ಟ್ರೀಯ ಸಮ್ಮೇಳನದಲ್ಲಿ 'ವಿಂಡ್ ಟರ್ಬೈನ್ ಪೂರೈಕೆ ಸರಪಳಿ ನಿರ್ವಹಣಾ' ಪೋರ್ಟಲ್ ಅನ್ನು ಬಿಡುಗಡೆ ಮಾಡಿದರು.

ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ಮತ್ತು ಇಂಡಿಯನ್ ವಿಂಡ್ ಟರ್ಬೈನ್ ಉತ್ಪಾದನಾ ಸಂಸ್ಥೆ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ಈ 'Wಖಿ-ಒಂಖUಖಿ' ಪೋರ್ಟಲ್, ಪವನ ಇಂಧನ ಪೂರೈಕೆ ಸರಪಳಿಯನ್ನು ಸುಗಮಗೊಳಿಸುವ ಉದ್ದೇಶವನ್ನು ಹೊಂದಿರುವ ದೇಶದ ಮೊದಲ ಡಿಜಿಟಲ್ ವೇದಿಕೆಯಾಗಿದೆ.

---

ಕಳೆದ ೧೨ ವರ್ಷಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳು ಭಾರತದ ಅಭಿವೃದ್ಧಿ ಪಥದ ಪ್ರೇರಕ ಶಕ್ತಿಗಳಾಗಿ ಹೊರಹೊಮ್ಮಿದ್ದು, ಆಡಳಿತ ಮತ್ತು ಸಾರ್ವಜನಿಕ ಕಲ್ಯಾಣದ ಪ್ರಮುಖ ಸ್ತಂಭಗಳಾಗಿ ಮಾರ್ಪಟ್ಟಿವೆ ಎಂದು ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

---

ಸುಲಭವಾಗಿ ಹಣಕಾಸು ಲಾಭ ಗಳಿಸುವ ಭರವಸೆ ನೀಡುವ ಹೂಡಿಕೆ ವೇದಿಕೆಯನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬೆಂಬಲಿಸಿರುವಂತೆ ಬಿಂಬಿಸಿರುವ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋವನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ. ವಾರ್ತಾ ಶಾಖೆ-ಪಿಐಬಿಯ ಸತ್ಯ ಶೋಧನಾ ಘಟಕ ವಿಡಿಯೋ ನಕಲಿ ಮತ್ತು ಎಐ ತಂತ್ರಜ್ಞಾನದ ಮೂಲಕ ಸೃಷ್ಟಿಸಲಾಗಿದೆ ಎಂದು ತಿಳಿಸಿದೆ.

---

ಜೆಕ್ ಗಣರಾಜ್ಯದಲ್ಲಿ ಇದೇ ೧೭ ರಿಂದ ೨೧ ರವರೆಗೆ ನಡೆಯಲಿರುವ ಪ್ರತಿಷ್ಠಿತ 'ಗ್ರ್ಯಾಂಡ್ ಪ್ರಿಕ್ಸ್ ಉಸ್ಟಿ ನಾಡ್ ಲ್ಯಾಬೆಮ್' ಬಾಕ್ಸಿಂಗ್ ಟೂರ್ನಿಗಾಗಿ ಭಾರತೀಯ ಬಾಕ್ಸಿಂಗ್ ಫೆಡರೇಶನ್ ೧೨ ಸದಸ್ಯರ ತಂಡವನ್ನು ಪ್ರಕಟಿಸಿದೆ. ಒಲಿಂಪಿಕ್ ಪದಕ ವಿಜೇತೆ ಲವ್ಲಿನಾ ಬೊರ್ಗೋಹೈನ್ ಮತ್ತು ಏಷ್ಯನ್ ಚಾಂಪಿಯನ್‌ಶಿಪ್ ಚಿನ್ನದ ಪದಕ ವಿಜೇತೆ ಪ್ರೀತಿ ಪವಾರ್ ಮಹಿಳಾ ತಂಡವನ್ನು ಮುನ್ನಡೆಸುತ್ತಿದ್ದು, ಸಾಕ್ಷಿ, ಪ್ರಿಯಾ ಮತ್ತು ಪರ್ವೀನ್ ತಂಡದ ಉಳಿದ ಸದಸ್ಯರಾಗಿದ್ದಾರೆ. ಗಾಯದ ಸಮಸ್ಯೆಯಿಂದಾಗಿ ತಾರಾ ಬಾಕ್ಸರ್‌ಗಳಾದ ಜೈಸ್ಮಿನ್ ಲ್ಯಾಂಬೊರಿಯಾ ಮತ್ತು ಅರುಂಧತಿ ಚೌಧರಿ ಈ ಪ್ರವಾಸದಿಂದ ಹೊರಗುಳಿದಿದ್ದಾರೆ.

---

ಅಮೆರಿಕಾದ ಜಾರ್ಜಿಯಾದ ಅಟ್ಲಾಂಟಾದಲ್ಲಿ ಇಂದು ನಡೆಯಲಿರುವ ಫಿಫಾ ವಿಶ್ವಕಪ್ ೨೦೨೬ ಫುಟ್ಬಾಲ್ ಪಂದ್ಯಾವಳಿಯ ಎಚ್ ಗುಂಪಿನ ಪಂದ್ಯದಲ್ಲಿ ಸ್ಪೇನ್ ಮತ್ತು ಕಾಬೊವರ್ಡೆ ಮುಖಾಮುಖಿಯಾಗಲಿವೆ. ಪಂದ್ಯ ಇಂದು ಭಾರತೀಯ ಕಾಲಮಾನ ರಾತ್ರಿ ೯.೩೦ಕ್ಕೆ ನಡೆಯಲಿದೆ. ಇಂದು ಸಿಯಾಟಲ್‌ನಲ್ಲಿ ಭಾರತೀಯ ಕಾಲಮಾನ ಮಧ್ಯ ರಾತ್ರಿ ೧೨.೩೦ಕ್ಕೆ ನಡೆಯಲಿರುವ ಜಿ ಗುಂಪಿನ ಪಂದ್ಯದಲ್ಲಿ ಬೆಲ್ಜಿಯಂ ಮತ್ತು ಈಜಿಪ್ಟ್ ತಂಡಗಳು ಮುಖಾಮುಖಿಯಾಗಲಿವೆ.

__________ ಮುಕ್ತಾಯ __________